All India Radio: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

24.03.2025 6.40 P.M.

******************

ಮುಖ್ಯಾಂಶಗಳು

- ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿದ ಬಳಿಕ ಹಾಲಿನ ದರ ಹೆಚ್ಚಳದ ಬಗ್ಗೆ ತೀರ್ಮಾನ - ಮುಖ್ಯಮಂತ್ರಿ ಸಿದ್ದರಾಮಯ್ಯ
- ನ್ಯಾಯಮೂರ್ತಿ ನಾಗಮೋಹನ್ ದಾಸ್ ಸಮಿತಿ ಮಧ್ಯಂತರ ವರದಿ ಬಳಿಕ ಒಳ ಮೀಸಲಾತಿ ಜಾರಿಗೆ ಕ್ರಮ - ಗೃಹ ಸಚಿವ ಡಾ.ಜಿ.ಪರಮೇಶ್ವರ್
- ಬೆಂಗಳೂರಿನಲ್ಲಿ ಇದೇ ೨೭ ರಂದು ನ್ಯಾನೊ ಎಲೆಕ್ಟ್ರಾನಿಕ್ಸ್, ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆ ಕುರಿತ ಸಮ್ಮೇಳನ
- ಕೇಂದ್ರ ಸರ್ಕಾರದ ರಾಷ್ಟ್ರೀಯ ರಕ್ಷಾ ವಿಶ್ವವಿದ್ಯಾಲಯದಿಂದ ಒಂದು ವರ್ಷದ ಹಣಕಾಸು, ಆರ್ಥಿಕ ಅಪರಾಧಗಳ ಸ್ನಾತಕೋತ್ತರ ಕೋರ್ಸ್
- ಕರಾವಳಿ, ಮೈಸೂರು ಶಿವಮೊಗ್ಗ ಸೇರಿದಂತೆ ಕೆಲ ಜಿಲ್ಲೆಗಳಲ್ಲಿ ಹಗುರ ಮಳೆ ಸಾಧ್ಯತೆ - ಹವಾಮಾನ ಇಲಾಖೆ ಮುನ್ಸೂಚನೆ

******************

ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿದ ಬಳಿಕ ಹಾಲಿನ ದರ ಹೆಚ್ಚಳ ಮಾಡಲು ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಜಿಲ್ಲಾ ಹಾಲು ಒಕ್ಕೂಟದ ಅಧ್ಯಕ್ಷರ ಹಾಗೂ ವ್ಯವಸ್ಥಾಪಕ ನಿರ್ದೇಶಕರೊಂದಿಗೆ ನಡೆದ ಸಭೆಯಲ್ಲಿ ಹಾಲಿನ ದರ ಹೆಚ್ಚಳ ಕುರಿತು ಒಕ್ಕೂಟಗಳ ಅಭಿಪ್ರಾಯ ಸಂಗ್ರಹಿಸಲಾಯಿತು. ಹಾಲಿನದರ ಹೆಚ್ಚಳ ಮಾಡಿದರೆ ಮೊತ್ತ ಸಂಪೂರ್ಣವಾಗಿ ರೈತರಿಗೆ ವರ್ಗಾವಣೆಯಾಗಬೇಕು ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದ್ದಾರೆ.

ಹಾಲು ಒಕ್ಕೂಟಗಳು ಖರ್ಚು ವೆಚ್ಚ ಕಡಿಮೆ ಮಾಡಬೇಕು. ಪಾರದರ್ಶಕತೆಯನ್ನು ಪಾಲಿಸಬೇಕು. ಒಕ್ಕೂಟಗಳು ಅಗತ್ಯಕ್ಕಿಂತ ಹೆಚ್ಚು ಜನರನ್ನು ಗುತ್ತಿಗೆ ಆಧಾರದಲ್ಲಿ ನೇಮಕ ಮಾಡಬಾರದು ಎಂದು ನಿರ್ದೇಶನ ನೀಡಿದ್ದಾರೆ.

******************

ಒಳ ಮೀಸಲಾತಿ ಕುರಿತಂತೆ ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ಸಮಿತಿಯು ಒಂದು ವಾರದೊಳಗೆ ಮಧ್ಯಂತರ ವರದಿ ಸಲ್ಲಿಸುವುದಾಗಿ ತಿಳಿಸಿದೆ. ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚರ್ಚಿಸಿ ಶೀಘ್ರದಲ್ಲಿ ಕ್ರಮ ಕೈಗೊಳ್ಳಲಿದ್ದಾರೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ಪರಿಶಿಷ್ಟ ಜಾತಿಗಳಲ್ಲಿ ಒಳಮೀಸಲಾತಿ ಕಲ್ಪಿಸುವ ಕುರಿತಂತೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾವೇರಿ ನಿವಾಸದಲ್ಲಿ ನಡೆದ ಸಭೆ ಬಳಿಕ ಮಾತನಾಡಿದ ಅವರು, ಪರಿಶಿಷ್ಟ ಜಾತಿಯ ಒಳ ಮೀಸಲಾತಿ ಜಾರಿಗೊಳಿಸಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

ಸಚಿವರುಗಳ ಮತ್ತು ಶಾಸಕರ ಫೋನ್ ಕದ್ದಾಲಿಕೆ ಆರೋಪದ ಬಗ್ಗೆ ಈವರೆಗೆ ಯಾವುದೇ ದೂರು ದಾಖಲಾಗಿಲ್ಲ ಎಂದು ಹೇಳಿದ್ದಾರೆ.

ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಮಾತನಾಡಿ, ಒಳ ಮೀಸಲಾತಿ ಜಾರಿ ಆಗುವವರೆಗೂ ಬ್ಯಾಕ್‌ಲಾಗ್ ಹುದ್ದೆ, ಮುಂಬಡ್ತಿ, ನೇಮಕಾತಿ ಮಾಡುವುದಿಲ್ಲ ಎಂದು ತಿಳಿಸಿದ್ದಾರೆ.

*******************

ಸರ್ಕಾರ ಮಹಿಳೆಯರ ಸಬಲೀಕರಣಕ್ಕೆ ಬದ್ಧವಾಗಿದ್ದು, ಇದಕ್ಕಾಗಿ ಅನೇಕ ಜನಪರ ಯೋಜನೆಗಳನ್ನು ಕಾರ್ಯಗತಗೊಳಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಇಂದು ನಡೆದ ಗರ್ಭಿಣಿಯರಿಗೆ ಸಾಮೂಹಿಕ ಸೀಮಂತ ಸಮಾರಂಭದಲ್ಲಿ ವಿಕಲಚೇತನರಿಗೆ ವಿವಿಧ ಸಾಧನ ಸಲಕರಣೆಗಳನ್ನು ವಿತರಿಸಿ ಮಾತನಾಡಿದ ಅವರು, ರಾಜ್ಯದ ಪ್ರತಿಯೊಂದು ಅಂಗನವಾಡಿಗಳನ್ನು ಉನ್ನತ ಮಾದರಿಯಲ್ಲಿ ಮೇಲ್ದರ್ಜೆಗೇರಿಸಲಾಗುವುದು ಎಂದು ಹೇಳಿದ್ದಾರೆ. ಮುಂಬರುವ ದಿನಗಳಲ್ಲಿ ಪ್ರತಿಯೊಂದು ಜಿಲ್ಲೆಯಲ್ಲಿ ಸಾಮೂಹಿಕ ಸೀಮಂತ ಕಾರ್ಯಕ್ರಮ ಏರ್ಪಡಿಸಲು ಸರ್ಕಾರ ಆದೇಶ ಹೊರಡಿಸಲಿದೆ ಎಂದು ತಿಳಿಸಿದೆ.

*******************

ಬೆಂಗಳೂರಿನಲ್ಲಿ ಇದೇ ೨೭ ರಿಂದ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ನ್ಯಾನೊ ಎಲೆಕ್ಟ್ರಾನಿಕ್ಸ್ ರೋಡ್ ಶೋ ಮತ್ತು ಸೆಮಿ ಕಂಡಕ್ಟರ್ ಪರಿಸರ ವ್ಯವಸ್ಥೆಯ ಸಮ್ಮೇಳನ ಆಯೋಜಿಸಿದೆ.

ಕ್ವಾಂಟಮ್ ತಂತ್ರಜ್ಞಾನ, ಕೃತಕಬುದ್ಧಿಮತ್ತೆ, ಮಾಹಿತಿ ತಂತ್ರಜ್ಞಾನ, ಎಲೆಕ್ಟ್ರಾನಿಕ್ಸ್ ಮತ್ತು ಸ್ಥಳೀಯ ನ್ಯಾನೊ ತಂತ್ರಜ್ಞಾನದ ಪ್ರಗತಿಗಳನ್ನು ರೋಡ್ ಶೋದಲ್ಲಿ ಪ್ರದರ್ಶಿಸಲು ನಿರ್ಧರಿಸಲಾಗಿದೆ.

ಆತ್ಮನಿರ್ಭರ ಭಾರತಕ್ಕಾಗಿ ಪ್ರಮುಖ ಪಾಲುದಾರರನ್ನು ಒಟ್ಟುಗೂಡಿಸಲು, ನಾವೀನ್ಯತೆ ಪ್ರದರ್ಶಿಸಲು ಮತ್ತು ಹೂಡಿಕೆಗಳನ್ನು ಆಕರ್ಷಿಸಲು ಈ ಸಮ್ಮೇಳನ-ಐಐಎಸ್‌ಸಿ ಆಯೋಜಿಸಲಾಗಿದೆ.

ಐಐಎಸ್‌ಸಿ ಬೆಂಗಳೂರು, ಐಐಟಿ ಬಾಂಬೆ, ಐಐಟಿ ಮದ್ರಾಸ್, ಐಐಟಿ ದೆಹಲಿ, ಐಐಟಿ ಖರಗ್‌ಪುರ ಹಾಗೂ ಐಐಟಿ ಗುವಾಹಟಿಯ ಸಹಭಾಗಿತ್ವದಲ್ಲಿ ಸಮ್ಮೇಳನ ಆಯೋಜನೆಗೊಂಡಿದೆ.

ಕಾರ್ಯಕ್ರಮದಲ್ಲಿ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ಕಾರ್ಯದರ್ಶಿ ಎಸ್ ಕೃಷ್ಣನ್, ಇಸ್ರೋ ಅಧ್ಯಕ್ಷ ವಿ.ನಾರಾಯಣನ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಸಮ್ಮೇಳನದ ಕುರಿತು ಮಾತನಾಡಿದ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಎಸ್ ಕೃಷ್ಣನ್, ಭಾರತದ ಸ್ವಾವಲಂಬನೆಯ ಹಾದಿಯಲ್ಲಿ ನ್ಯಾನೊ ತಂತ್ರಜ್ಞಾನ, ರೋಡ್ ಶೋ ನಿರ್ಣಾಯಕವಾಗಿದೆ ಎಂದು ತಿಳಿಸಿದ್ದಾರೆ.

ದೇಶದ ೬ ಐಐಟಿಗಳಲ್ಲಿ ಮತ್ತು ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ ನ್ಯಾನೊ ವಿಜ್ಞಾನ ಕೇಂದ್ರಗಳನ್ನು ಉತ್ತೇಜಿಸಲಾಗಿದೆ. ಈ ಸಮ್ಮೇಳನದಲ್ಲಿ ೨೫ ಡೀಪ್‌ಟೆಕ್ ನವೋದ್ಯಮಗಳು, ೨೫ ಇತರ ಕೈಗಾರಿಕಾ ಕೇಂದ್ರಗಳು ಹಾಗೂ ೨೫ ಬಂಡವಾಳ ಹೂಡಿಕೆ ಸಂಸ್ಥೆಗಳು ಭಾಗವಹಿಸಲಿವೆ ಎಂದು ಅವರು ಮಾಹಿತಿ ನೀಡಿದ್ದಾರೆ.

*******************

ರಷ್ಟ್ರೀಯ ರಕ್ಷಾ ವಿಶ್ವವಿದ್ಯಾಲಯ ಒಂದು ವರ್ಷದ ಹಣಕಾಸು ಮತ್ತು ಆರ್ಥಿಕ ಅಪರಾಧಗಳ ಸ್ನಾತಕೋತ್ತರ ಕೋರ್ಸ್ ಪ್ರಾರಂಭಿಸಿದೆ. ಈ ಕುರಿತಂತೆ ಬೆಂಗಳೂರಿನಲ್ಲಿ ವೀಡಿಯೋ ಕಾನ್ಫರೆನ್ಸಿಂಗ್ ಮೂಲಕ ಘೋಷಣೆ ಮಾಡಿದ ಕುಲಪತಿ ಪ್ರೊಫೆಸರ್ ಬಿಮಲ್ ಎನ್. ಪಟೇಲ್, ಈ ಕೋರ್ಸ್‌ಗೆ ಆರ್‌ಬಿಐ, ಸೆಬಿ, ಮುಂತಾದ ಹಣಕಾಸು ನಿಯಂತ್ರಣ ಸಂಸ್ಥೆಗಳಲ್ಲದೆ, ಸಿಬಿಐ, ಎನ್‌ಐಎ, ಪಿಎಫ್‌ಆರ್‌ಡಿಎ, ಕಾನೂನು ಜಾರಿಗೆ ತರುವ ಸಂಸ್ಥೆಗಳ ಸಹಮತವಿದೆ ಎಂದು ತಿಳಿಸಿದ್ದಾರೆ. ಈ ಕಾರ್ಯಕ್ರಮವು ಆರ್ಥಿಕ ಮತ್ತು ಹಣಕಾಸು ಅಪರಾಧಗಳನ್ನು ತಡೆಗಟ್ಟಲು ಮತ್ತು ನಿಯಂತ್ರಿಸಲು ಕೌಶಲ್ಯಾತ್ಮಕ ಸಲಹೆಗಳನ್ನು ನೀಡಲಿವೆ ಎಂದು ಹೇಳಿದ್ದಾರೆ.

ವಿಶ್ವವಿದ್ಯಾಲಯವು ತನ್ನ ವಿವಿಧ ಕ್ಯಾಂಪಸ್‌ಗಳಲ್ಲಿ ಶೇಕಡ ೯೩ ರಷ್ಟು ಉದ್ಯೋಗ ನೀಡುವ ಭರವಸೆ ವ್ಯಕ್ತಪಡಿಸಿದ್ದಾರೆ.

ಧ್ವನಿ: ಕುಲಪತಿ ಪ್ರೊಫೆಸರ್ ಬಿಮಲ್ ಎನ್. ಪಟೇಲ್ ( ೧೮ ಸೆಕೆಂಡ್‌ಗಳು)

ಭಾರತೀಯ ಕಾರ್ಪೊರೇಟ್ ವ್ಯವಹಾರಗಳ ಸಂಸ್ಥೆಯ ಮುಖ್ಯಸ್ಥ ಪ್ರೊ. ಡಾ. ನೀರಜ್ ಗುಪ್ತಾ ಮಾತನಾಡಿ, ಗುಜರಾತ್‌ನ ಗಾಂಧೀನಗರದಲ್ಲಿ  ಕೇಂದ್ರ ಹೊಂದಿರುವ ವಿಶ್ವವಿದ್ಯಾಲಯವು ಶಿವಮೊಗ್ಗದಲ್ಲಿ ಶಾಖೆ ಹೊಂದಿದೆ ಎಂದು ಮಾಹಿತಿ ನೀಡಿದ್ದಾರೆ.

*******************

ಸದನದಲ್ಲಿ ಪ್ರತಿಭಟನೆ ನಡೆಸಿರುವುದಕ್ಕೆ ಶಾಸಕರನ್ನೇ ಅಮಾನತು ಮಾಡಲಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗುತ್ತಿಗೆಯಲ್ಲಿನ ಮೀಸಲಾತಿಯಿಂದಾಗಿ ಹಿಂದೂಗಳಿಗೆ ಅವಕಾಶ ಕಡಿಮೆಯಾಗಿದೆ ಎಂದು ತಿಳಿಸಿದ್ದಾರೆ. ಸರ್ಕಾರ ಪ್ರಮುಖ ನಾಯಕರ ಫೋನ್ ಕದ್ದಾಲಿಕೆ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ.

ಇನ್ನೊಂದೆಡೆ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಾತನಾಡಿ, ಮುಸ್ಲೀಮರಿಗೆ ಗುತ್ತಿಗೆಯಲ್ಲಿ ಶೇಕಡ ೪ ರಷ್ಟು ಮೀಸಲಾತಿ ನೀಡುವುದರ ಮೂಲಕ ಸರ್ಕಾರ ಸಂವಿಧಾನ ವಿರೋಧಿ ಕೆಲಸಗಳನ್ನು ಮಾಡುತ್ತಿದೆ ಎಂದು ಹೇಳಿದ್ದಾರೆ.

ಈ ಸರ್ಕಾರಕ್ಕೆ ಆಡಳಿತ ನಡೆಸಲು ಯಾವುದೇ ನೈತಿಕ ಹಕ್ಕು ಇಲ್ಲ ಎಂದು ತಿಳಿಸಿದ್ದಾರೆ.

*******************

ಗೂಗಲ್‌ನಲ್ಲಿನ ಧ್ವನಿಯಲ್ಲಿ ರಾಜ್ಯದ ೭೧ ಸಾವಿರ ಹಳ್ಳಿಗಳ ಹೆಸರು ತಪ್ಪಾಗಿ ಉಚ್ಚಾರಣೆಯಾಗಿ, ಗೊಂದಲ, ಉಂಟಾಗುತ್ತಿದೆ. ಇದನ್ನು ಸರಿಪಡಿಸಲು ಕಂದಾಯ ಇಲಾಖೆ, ಗೂಗಲ್ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸಮನ್ವಯದೊಂದಿಗೆ ಹೊಸ ಯೋಜನೆಯೊಂದನ್ನು ರೂಪಿಸಲಾಗುವುದು ಎಂದು ಕನ್ನಡ ಪ್ರಾಧಿಕಾರದ ಅಧ್ಯಕ್ಷ ಡಾ.ಪುರಷೋತ್ತಮ ಬಿಳಿಮಲೆ ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದಲ್ಲಿ ಜಿಲ್ಲೆಯ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆ ನಡೆಸಿ  ಮಾತನಾಡಿದ ಅವರು, ಪ್ರಾಧಿಕಾರದ ಚಟುವಟಿಕೆಗಳಿಗೆ ಕನಿಷ್ಠ ೨೦ ಕೋಟಿ ಅನುದಾನದ ಅಗತ್ಯವಿದ್ದು, ಈ ವರ್ಷ ಕನಿಷ್ಠ ೫ ಕೋಟಿಯನ್ನಾದರೂ ಬಿಡುಗಡೆ ಮಾಡಲು ಮನವಿ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ.

ಧ್ವನಿ: ಪುರುಷೋತ್ತಮ್ ಬಿಳಿಮಲೆ, ಕನ್ನಡ ಪ್ರಾಧಿಕಾರದ ಅಧ್ಯಕ್ಷ

******************

ಇಂದು ವಿಶ್ವ ಕ್ಷಯರೋಗ ದಿನ. ಕ್ಷಯರೋಗ ಕುರಿತು ಜಾಗೃತಿ ಮೂಡಿಸಿ ಕ್ಷಯರೋಗ ಮುಕ್ತ ಸಮಾಜ ನಿರ್ಮಾಣ ಮಾಡಲು ಪ್ರತಿವರ್ಷ ಮಾರ್ಚ್ ೨೪ರಂದು ವಿಶ್ವ ಕ್ಷಯರೋಗ ದಿನ ಆಚರಿಸಲಾಗುತ್ತದೆ.

ಕ್ಷಯ ಮುಕ್ತ ದೇಶವನ್ನಾಗಿ ಮಾಡುವಲ್ಲಿ ಎಲ್ಲರೂ ಸಂಕಲ್ಪ ಮಾಡಬೇಕೆಂದು ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ ಅವರು ಗದಗನಲ್ಲಿ ತಿಳಿಸಿದ್ದಾರೆ.

ಧಾರವಾಡ ಜಿಲ್ಲೆಯಲ್ಲಿನ ಸುಮಾರು ೩೫ ಗ್ರಾಮ ಪಂಚಾಯಿತಿಗಳನ್ನು ಕ್ಷಯ ಮುಕ್ತ ಗ್ರಾಮ ಪಂಚಾಯಿತಿಗಳನ್ನಾಗಿ ಮಾಡಿದ್ದು ಅಭಿನಂದನೀಯ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದ್ದಾರೆ.

******************

ಇನ್ನು ಹವಾವರ್ತಾಮಾನ...

ರಾಜ್ಯದ ದಕ್ಷಿಣ ಒಳನಾಡಿನ ಕೆಲವು ಕಡೆಗಳಲ್ಲಿ ಮತ್ತು ಉತ್ತರ ಒಳನಾಡಿನ ಒಂದೆಡರು ಕಡೆಗಳಲ್ಲಿ ಮಳೆಯಾಗಿದೆ. ಕರಾವಳಿಯಲ್ಲಿ ಒಣಹವೆ ಇತ್ತು.

ಉಡುಪಿ, ದಕ್ಷಿಣ ಕನ್ನಡ, ಬೆಳಗಾವಿ, ಧಾರವಾಡ, ವಿಜಯಪುರ, ಬಾಗಲಕೋಟೆ, ಕೊಡಗು, ಹಾಸನ, ಚಿಕ್ಕಮಗಳೂರು, ಶಿವಮೊಗ್ಗ, ಚಾಮರಾಜನಗರ, ಮೈಸೂರು ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಲಘು ಮಳೆಯಾಗುವ ಸಾಧ್ಯತೆಯಿದೆ.

ಕಲಬುರಗಿಯಲ್ಲಿ ಗರಿಷ್ಠ ತಾಪಮಾನ ೩೯ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.

**********ಮುಕ್ತಾಯ*********